ಸೃಜನಿ

SRUJANI: Indian Journal of Innovative Research and Development (SIJIRD)
Volume-5 Issue 3, July-August 2026, Pp. 110-112
Bi-Monthly, Peer-Reviewed, Open Access, Indexed Journal

I S S N: 2583-3510
SIRDF JOURNALS
editor@srujani.in
www.srujani.in

# ಮಹಿಳೆಯರ ಆರ್ಥಿಕ ಸಬಲೀಕರಣ ಮತ್ತು ರಕ್ಷಣೆ: ಒಂದು ಅಧ್ಯಯನ

**ಬ್ರಮರಾಂಬ ಎಸ್. ಎಂ**
ಸಹ ಪ್ರಾಧ್ಯಾಪಕರು, ಇತಿಹಾಸ ವಿಭಾಗ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೊಸದುರ್ಗ

**Abstract:**
*ಜಗತ್ತಿನ ಹಾಗೂ ಯಾವುದೇ ರಾಷ್ಟ್ರದ ಅರ್ಧದಷ್ಟಿರುವ ಮಹಿಳೆಯರ ಸರ್ವತೋಮುಖ ಅಭಿವೃದ್ಧಿಗಾಗಿ ಸರ್ಕಾರವು ಹಲವಾರು ಯೋಜನೆಗಳನ್ನು ಜಾರಿಗೆ ತಂದಿದೆ. ಮಹಿಳೆಯರನ್ನು ಸ್ವಾವಲಂಬನೆಗೊಳಿಸಲು ಹಾಗೂ ಮಹಿಳೆಯರನ್ನು ಪ್ರತಿಯೊಂದು ಹಂತದಲ್ಲೂ ಸ್ವಾವಲಂಬಿಗಳನ್ನಾಗಿಸುವುದು ಸರ್ಕಾರದ ಮುಖ್ಯ ಗುರಿಯಾಗಿದೆ. ಮಹಿಳೆಯರ ಸಮಗ್ರ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ಜಾರಿಗೆ ತಂದಿರುವ ಈ ಯೋಜನೆಗಳು ಸಮಾಜದಲ್ಲಿ ಮಹಿಳೆಯರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸುವ ಮಹತ್ವದ ಹೆಜ್ಜೆಯಾಗಿದೆ. ಪ್ರಸ್ತುತ ಅಧ್ಯಯನವು ಕರ್ನಾಟಕ ಸರ್ಕಾರವು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಮೂಲಕ ಮಹಿಳೆಯರನ್ನು ಉದ್ಯಮಿಗಳನ್ನಾಗಿ ಮಾಡಲು ಹಲವು ಕ್ರಮ ಕೈಗೊಂಡಿದ್ದು ಈ ಕಾರ್ಯಕ್ರಮಗಳ ಬಗ್ಗೆ ತಿಳಿಯುವುದಾಗಿದೆ.*

**Keywords:** *ಮಹಿಳಾ ಕಾರ್ಯಕ್ರಮಗಳು, ಸುರಕ್ಷತೆ ಮತ್ತು ಸಾಮಾಜಿಕ ರಕ್ಷಣೆ*

## ಪೀಠಿಕೆ

ದೇಶದ ಜನಸಂಖ್ಯೆಯಲ್ಲಿ ಸುಮಾರು ಅರ್ಧದಷ್ಟು ಮಹಿಳೆಯರಿದ್ದಾರೆ. ಅವರ ಸರ್ವತೋಮುಖ ಅಭಿವೃದ್ಧಿಗಾಗಿ ಕರ್ನಾಟಕ ಸರ್ಕಾರವು ಹಲವು ಯೋಜನೆಗಳನ್ನು ಜಾರಿಗೆ ತಂದಿದೆ. ಮಹಿಳೆಯರನ್ನು ಆರ್ಥಿಕ ಸ್ವಾವಲಂಬನೆಗೊಳಿಸಿ ಸಶಕ್ತಗೊಳಿಸುವುದು ಸರ್ಕಾರದ ಮುಖ್ಯಗುರಿಯಾಗಿದೆ. ಮಕ್ಕಳ ಮಹಿಳೆಯರ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರವು ಜಾರಿಗೆ ತಂದಿರುವ ಈ ಯೋಜನೆಗಳು ಸಮಾಜದಲ್ಲಿ ಸಬಲೀಕರಣಗೊಳಿಸುವಲ್ಲಿ ಮಹತ್ವದ ಹೆಜ್ಜೆಯಾಗಿದೆ.

### ಸ್ವಸಹಾಯ ಸಂಘಗಳು:

ರಾಜ್ಯದಲ್ಲಿ 1.65ಲಕ್ಷಕ್ಕೂ ಹೆಚ್ಚು ಗುಂಪುಗಳಿದ್ದು 25ಲಕ್ಷ ಮಹಿಳೆಯರು ಸಂಘಟಿತರಾಗಿದ್ದಾರೆ. ಮಹಿಳಾ ಉದ್ಯಮಿಗಳಿಗೆ ಗರಿಷ್ಟ 25 ಲಕ್ಷರೂ ವರೆಗೆ ಸಾಲಸೌಲಭ್ಯವಿದೆ.

### MSIL (ಎಂಎಸ್‌ಐಎಲ್) ಚಿಟ್ ಫಂಡ್ ಯೋಜನೆ:

ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ ಚಿಟ್ ಫಂಡ್ ಮಹಿಳೆಯರಿಗಾಗಿ ವಿಶೇಷವಾಗಿ ಗೃಹಲಕ್ಷ್ಮಿ ಫಲಾನುಭವಿಗಳು ಮತ್ತು ಸ್ವಸಹಾಯ ಸಂಘಗಳ ಸದಸ್ಯರಿಗೆ ಸುರಕ್ಷಿತ ಉಳಿತಾಯ ಮತ್ತು ಹೂಡಿಕೆ ಅವಕಾಶಗಳನ್ನು ಒದಗಿಸುತ್ತದೆ. ಇದು ಕರ್ನಾಟಕ ಸರ್ಕಾರದ ಮಾಲೀಕತ್ವದ ಸಂಸ್ಥೆಯಾಗಿದ್ದು ಪಾರದರ್ಶಕತೆ ವಿಶ್ವಾಸಾರ್ಹತೆ ಮತ್ತು ಗ್ರಾಮೀಣ ಭಾಗದ ಜನರನ್ನು ಮೈಕ್ರೋ ಫೈನ್ಯಾನ್ಸ್ ಶೋಷಣೆಯಿಂದ ರಕ್ಷಿಸುವ ಗುರಿಯನ್ನು ಹೊಂದಿದೆ.

### ಉದ್ಯೋಗಸ್ಥ ಮಹಿಳೆಯರಿಗೆ ವಸತಿನಿಲಯಗಳು

6 ಪ್ರಮುಖ ನಗರಗಳಲ್ಲಿ 23 ಉದ್ಯೋಗಸ್ಥ ಮಹಿಳೆಯರಿಗೆ ವಸತಿ ನಿಲಯಗಳನ್ನು ಬಾಡಿಗೆ

***Please cite this article as:*** ಬ್ರಮರಾಂಬ, ಎಸ್.ಎಂ. (2026). ಮಹಿಳೆಯರ ಆರ್ಥಿಕ ಸಬಲೀಕರಣ ಮತ್ತು ರಕ್ಷಣೆ: ಒಂದು ಅಧ್ಯಯನ. *ಸೃಜನಿ: ಇಂಡಿಯನ್ ಜರ್ನಲ್ ಆಫ್ ಇನ್ನೋವೇಟಿವ್ ರೀಸರ್ಚ್ ಅಂಡ್ ಡೆವಲಪ್‌ಮೆಂಟ್,* 5(3), 110–112

ಕಟ್ಟಡಗಳಲ್ಲಿ ಪ್ರಾರಂಭಿಸಲಾಗಿದೆ. ಗಾರ್ಮೆಂಟ್ಸ್, ಕೈಗಾರಿಕೆಗಳು ಮತ್ತೀತರ ಅಸಂಘಟಿತ ವಲಯಗಳಲ್ಲಿ ಕೆಲಸ ಮಾಡುವ ಮಹಿಳೆಯರಿಗೆ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಅಲ್ಪಸಂಖ್ಯಾತರ ದುಡಿಯುವ ಮಹಿಳೆಯರಿಗೆ ಆದ್ಯತೆಯ ಮೇರೆಗೆ ಸೌಲಭ್ಯ ನೀಡಲಾಗುತ್ತಿದೆ. 2026–27ನೇ ಆಯವ್ಯಯದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಉದ್ಯೋಗಸ್ಥ ಮಹಿಳೆಯರಿಗೆ ತಲಾ 50 ಸಂಖ್ಯಾಬಲದ 10 ವಸತಿನಿಲಯಗಳನ್ನು ಬೆಂಗಳೂರು, ಮೈಸೂರು, ಹುಬ್ಬಳ್ಳಿ–ಧಾರವಾಡ, ಮಂಗಳೂರು, ಬೆಳಗಾವಿ ಮತ್ತು ಕಲಬುರುಗಿಯಲ್ಲಿ ಪ್ರಾರಂಭಿಸಲು ಘೋಷಿಸಲಾಗಿದೆ.

**ಕೂಸಿನಮನೆ**

ನರೇಗಾ (MGNREGA) ಅಡಿಯಲ್ಲಿ ಕೆಲಸಮಾಡುವ ತಾಯಂದಿರ ಮಕ್ಕಳ ಆರೈಕೆಗಾಗಿ 4,000 ಗ್ರಾಮ ಪಂಚಾಯಿತಿಗಳಲ್ಲಿ ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಮಹಿಳೆಯರ ಉದ್ಯೋಗ ಭಾಗವಹಿಸುವಿಕೆಯನ್ನು ಹೆಚ್ಚಿಸುವ ಗುರಿಯೊಂದಿಗೆ ಈ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, 6 ತಿಂಗಳಿಂದ 3 ವರ್ಷ ವಯಸ್ಸಿನ ಮಕ್ಕಳಿಗೆ ಸುರಕ್ಷತೆ, ಸ್ವಚ್ಛತೆ, ಆರೋಗ್ಯ, ಪೌಷ್ಠಿಕ ಅಹಾರ ಮತ್ತು ಪ್ರಾಥಮಿಕ ಬೆಳವಣಿಗೆಗೆ ಅಗತ್ಯವಾದ ಉತ್ತೇಜನವನ್ನು ಒದಗಿಸಲಾಗುತ್ತದೆ. ಇದರಿಂದ ಕೆಲಸ ಮಾಡುವ ತಾಯಂದಿರಿಗೆ ತಮ್ಮ ಮಕ್ಕಳ ಆರೈಕೆಯ ಬಗ್ಗೆ ಆತಂಕವಿಲ್ಲದೆ ಕೆಲಸ ಮಾಡಲು ಸಹಾಯಕವಾಗುತ್ತದೆ.

**ಶಿಶುವಿಹಾರಗಳು**

ರಾಜ್ಯದ ಪ್ರತಿ ಜಿಲ್ಲೆಯ 2 ಸರ್ಕಾರಿ ಕಛೇರಿಗಳಲ್ಲಿ ಮತ್ತು ಪ್ರತಿ ಜಿಲ್ಲೆಯ 2 ತಾಲೂಕುಗಳಲ್ಲಿ ಹೆಚ್ಚು ಮಹಿಳಾ ಸಾಂದ್ರತೆಯಿರುವ ಪ್ರದೇಶಗಳಲ್ಲಿ ಮತ್ತು 123 ಶಿಶುಪಾಲನಾ ಉದ್ಯೋಗಸ್ಥ ಮಹಿಳೆಯರ ಅನುಕೂಲಕ್ಕಾಗಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. 2986 ಮಕ್ಕಳು ಯೋಜನೆಯ ಪ್ರಯೋಜನ ಪಡೆದಿರುತ್ತಾರೆ. 2026–27ನೇ ಆಯವ್ಯಯದಲ್ಲಿ 20 ಹೊಸ ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಲು 1 ಕೋಟಿ ಅನುದಾನವನ್ನು ನೀಡಲಾಗಿದೆ.

**ಸಂಜೀವಿನಿ (NRLM)**

ಮಹಿಳಾ ಸ್ವಸಹಾಯ ಸಂಘಗಳನ್ನು ಬಲಪಡಿಸುವ ಮತ್ತು ಆ ಮೂಲಕ ಗ್ರಾಮೀಣ ಬಡಕುಟುಂಬಗಳಿಗೆ ಆರ್ಥಿಕ ನೆರವನ್ನು ನೀಡುವ ಗುರಿಯನ್ನು ಹೊಂದಿದೆ. ಪ್ರಸ್ತುತ ಈ ಸಂಸ್ಥೆಯು ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದೆ. ಸುಮಾರು 30ಲಕ್ಷ ಗ್ರಾಮೀಣ ಮಹಿಳೆಯರನ್ನು ಸಂಘಟಿಸಿ ಕಿರು ಉದ್ದಿಮೆಗಳನ್ನು ಪ್ರಾರಂಭಿಸಲು ಬೆಂಬಲ ನೀಡಲಾಗುತ್ತಿದೆ.

**ಉದ್ಯೋಗಿನಿ ಯೋಜನೆ:** ಸ್ವಯಂ ಉದ್ಯೋಗಕ್ಕಾಗಿ 1 ರಿಂದ 3 ಲಕ್ಷ ರೂ ವರೆಗೆ ಸಾಲ ಮತ್ತು ಸಹಾಯಧನ.

**ಚೇತನ ಯೋಜನೆ:** ದಮನಿತ ಮಹಿಳೆಯರ ಪುನರ್ವಸತಿಗಾಗಿ 30,000ರೂ ಪ್ರೋತ್ಸಾಹ ಧನ.

**ಸುರಕ್ಷತೆ ಮತ್ತು ಸಾಮಾಜಿಕ ರಕ್ಷಣೆ**

**ಅಕ್ಕ ಪಡೆ:**

ಕಳೆದ ಸಾಲಿನಲ್ಲಿ ಮಹಿಳೆಯರ ವಿರುದ್ಧದ ಅಪರಾಧ ಪ್ರಕರಣಗಳಿಗೆ ಸಂಬಂಧಿಸಿದಂತೆ, 2,831 ವರದಕ್ಷಿಣೆ ಕಿರುಕುಳ ಪ್ರಕರಣಗಳು ದಾಖಲಾಗಿದ್ದು, 5,842 ಲೈಂಗಿಕ ದೌರ್ಜನ್ಯ ಪ್ರಕರಣಗಳು ವರದಿಯಾಗಿದ್ದು ಅಪಾಯದಲ್ಲಿರುವ ಅಥವಾ ಸಂಕಷ್ಟದಲ್ಲಿರುವ ಮಹಿಳೆಯರು ಮತ್ತು ಮಕ್ಕಳಿಗೆ ತಕ್ಷಣದ ರಕ್ಷಣೆಗಾಗಿ 2025–26ನೇ ಸಾಲಿನಿಂದ "ಅಕ್ಕ ಪಡೆಯನ್ನು" ಜಾರಿಗೊಳಿಸಲಾಗಿದೆ. ರಾಜ್ಯದ 31ಜಿಲ್ಲೆಗಳಲ್ಲಿ ಗೃಹ ರಕ್ಷಕ ಧಳದ ಮಹಿಳಾ ಸದಸ್ಯರನ್ನೊಳಗೊಂಡ ಈ ಪಡೆ ಗಸ್ತು ಸಂಚರಿಸಲು ವಾಹನ ಸೌಲಭ್ಯವನ್ನು ಹೊಂದಿದಿದೆ.

**ಶಕ್ತಿ ಸದನ (ಸ್ವಾಧಾರ ಗೃಹ ಮತ್ತು ಉಜ್ವಲ ಕೇಂದ್ರ)**

ಸ್ವಾಧಾರ ಗೃಹ ಯೋಜನೆಯ ಮುಖ್ಯ ಉದ್ದೇಶ ಕಷ್ಟಕರ ಪರಿಸ್ಥಿತಿಯಲ್ಲಿರುವ ಮಹಿಳೆಯರಿಗೆ ಆಶ್ರಯ,

ತರಬೇತಿ ಹಾಗೂ ಶಿಕ್ಷಣ ನೀಡುವುದರ ಮೂಲಕ ಆರ್ಥಿಕವಾಗಿ, ಸಾಮಾಜಿಕವಾಗಿ ಸಶಕ್ತರನ್ನಾಗಿ ಮಾಡುವುದಾಗಿರುತ್ತದೆ. ಉಜ್ವಲ ಯೋಜನೆಯು ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ತಡೆಗಟ್ಟಲು ಹಾಗೂ ಸಾಗಾಣಿಕೆ ಮತ್ತು ವಾಣಿಜ್ಯ ಲೈಂಗಿಕ ದುರುಪಯೋಗಕ್ಕೆ ಒಳಪಟ್ಟವರನ್ನು ರಕ್ಷಿಸಲು ಮತ್ತು ಪುನರ್ವಸತಿ ಕಲ್ಪಿಸಲು ಹಾಗೂ ಇವರುಗಳ ಕುಟುಂಬದೊಂದಿಗೆ ಪುನರ್ ವಿಲೀನಗೊಳಿಸುವ ಉದ್ದೇಶವನ್ನು ಹೊಂದಿರುತ್ತದೆ. ಪ್ರಸ್ತುತ ರಾಜ್ಯಾದ್ಯಂತ 40 ಶಕ್ತಿ ಸದನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

**ಒನ್ ಸ್ಟಾಪ್ ಸೆಂಟರ್ (ಸಖಿ)**

ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯ ಅಂದರೆ ವೈದ್ಯಕೀಯ ಚಿಕಿತ್ಸೆ ಮತ್ತು ನೆರವು, ಪೋಲಿಸ್ ನೆರವು, ಕಾನೂನು ನೆರವು ಹಾಗೂ ಸಮಾಲೋಚನೆ ವ್ಯವಸ್ಥೆಗಳನ್ನು ಒನ್ ಸ್ಟಾಪ್ ಸೆಂಟರ್‌ನಲ್ಲಿ ಒದಗಿಸಲಾಗುತ್ತಿದೆ. ರಾಜ್ಯದ 31 ಜಿಲ್ಲೆಗಳಲ್ಲಿ ಒನ್ ಸ್ಟಾಪ್ ಸೆಂಟರ್ (ಸಖಿ)ಗಳು ಕಾರ್ಯನಿರ್ವಸಿಸುತ್ತಿವೆ.

**ಸಾಂತ್ವನ ಯೋಜನೆ**

ಸಮಾಜದಲ್ಲಿ ವರದಕ್ಷಿಣೆ ಕಿರುಕುಳ, ಲೈಂಗಿಕ ಕಿರುಕುಳ, ಕೌಟುಂಬಿಕ ದೌರ್ಜನ್ಯ, ಅತ್ಯಾಚಾರಕ್ಕೊಳಗಾದ ಮಹಿಳೆಯರಿಗೆ ಕಾನೂನು ನೆರವು ಹಾಗೂ ಸಮಾಲೋಚನೆಯನ್ನು ಒದಗಿಸಲಾಗುತ್ತಿದೆ. ಪ್ರಸ್ತುತ 177 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

**ಮಾಜಿ ದೇವದಾಸಿ ಪುನರ್ವಸತಿ**

ಆರ್ಥಿಕವಾಗಿ ಹಿಂದುಳಿದ ಮಾಜಿ ದೇವದಾಸಿಯರನ್ನು ಸಬಲೀಕರಣಗೊಳಿಸಲು ಆದಾಯೋತ್ಪನ್ನಕರ ಚಟುವಟಿಕೆ ಕೈಗೊಳ್ಳುವ ಉದ್ದೇಶಕ್ಕಾಗಿ ನಿಗಮದಿಂದ 45 ವರ್ಷ ಮೇಲ್ಪಟ್ಟ ಮಾಜಿ ದೇವದಾಸಿ ಮಹಿಳೆಯರಿಗೆ ನೇರವಾಗಿ ಪ್ರೋತ್ಸಾಹ ಧನ ಮೊತ್ತ 45,000ರೂ ಆರ್ಥಿಕ ಸೌಲಭ್ಯವನ್ನು ನೀಡಲಾಗುತ್ತಿದೆ. ಫಲಾನುಭವಿಗಳನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಆಯ್ಕೆಸಮಿತಿಯಿಂದ ಆಯ್ಕೆ ಮಾಡಲಾಗುತ್ತಿದೆ.

**ಪರಾಮರ್ಶನ ಗ್ರಂಥಗಳು**


- ಕರ್ನಾಟಕ ಮಹಿಳಾ ಅಭಿವೃದ್ಧಿ ನಿಗಮ ಅಂತರ್ಜಾಲ https://kswdc.karnataka.gov.in/
- ಲಾಲ್ ದಾಸ್, ಡಿ.ಕೆ. (2014). *ಪ್ರಾಕ್ಟೀಸ್ ಆಫ್ ಸೋಶಿಯಲ್ ರೀಸರ್ಚ್.* ರಾವತ್ ಪಬ್ಲಿಕೇಷನ್ಸ್.
- ರಾಮ್ ಅಹುಜಾ. (2014). *ಸೊಸೈಟಿ ಇನ್ ಇಂಡಿಯಾ.* ರಾವತ್ ಪಬ್ಲಿಕೇಷನ್ಸ್.
- ರಾಮ್ ಅಹುಜಾ .(2018). *ಇಂಡಿಯನ್ ಸೋಶಿಯಲ್ ಸಿಸ್ಟಂ.* ರಾವತ್ ಪಬ್ಲಿಕೇಷನ್ಸ್.